**Akashvani : Bangalore**
**National Bulletin In Kannada**
**28.03.2024 / 13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**28.03.2024 / 13.10 hrs**

<><*<><>*><>

ಮುಖ್ಯಾಂಶಗಳು

೧. ಲೋಕಸಭೆಯ ಎರಡನೇ ಹಂತದ ಚುನಾವಣೆಗೆ ಅಧಿಸೂಚನೆ ಪ್ರಕಟ; ಇಂದಿನಿಂದಲೇ ನಾಮಪತ್ರ ಸಲ್ಲಿಕೆ ಆರಂಭ

೨. ನವದೆಹಲಿಯಲ್ಲಿ ಇಂದಿನಿಂದ ಸೇನಾ ಕಮಾಂಡರ್‌ಗಳ ಸಮಾವೇಶ; ಏಪ್ರಿಲ್ ೨ರಂದು ಸಮಾರೋಪದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಭಾಗಿ

೩. ವಿಶ್ವಾದ್ಯಂತ ೨೦೨೨ ರಲ್ಲಿ ಉತ್ಪಾದಿಸಲಾದ ಆಹಾರದಲ್ಲಿ ಶೇಕಡ ೧೯ ರಷ್ಟು ಜಾಗತಿಕವಾಗಿ ವ್ಯರ್ಥ; ವಿಶ್ವಸಂಸ್ಥೆ ವರದಿಯಲ್ಲಿ ಉಲ್ಲೇಖ

೪. ಮಿಯಾಮಿ ಓಪನ್ ಟೆನಿಸ್; ಡಬಲ್ಸ್ ಸೆಮಿಫೈನಲ್ಸ್‌ನಲ್ಲಿಂದು ಭಾರತದ ರೋಹನ್ ಬೋಪಣ್ಣ -ಆಸ್ಟ್ರೇಲಿಯಾದ ಮ್ಯಾಥ್ಯೂ ಎಬ್ಡೆನ್‌ಗೆ ಸ್ಪೇನ್ - ಅರ್ಜೆಂಟೀನಾ ಜೋಡಿ ಸವಾಲು

೫. ಐಪಿಎಲ್ ಟಿ-೨೦ ಕ್ರಿಕೆಟ್; ಜೈಪುರದಲ್ಲಿ ಇಂದು ರಾತ್ರಿ ರಾಜಸ್ಥಾನ ರಾಯಲ್ಸ್ - ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ

<><*<><>*><>

ಲೋಕಸಭಾ ಚುನಾವಣೆಯ ೨ನೇ ಹಂತಕ್ಕೆ ಕೇಂದ್ರ ಚುನಾವಣಾ ಆಯೋಗ ಇಂದು ಅಧಿಸೂಚನೆ ಹೊರಡಿಸಿದೆ. ಈ ಹಂತದಲ್ಲಿ ೧೨ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿರುವ ೮೮ ಸಂಸದೀಯ ಮತಕ್ಷೇತ್ರಗಳಿಗೆ ಏಪ್ರಿಲ್ ೨೬ ರಂದು ಮತದಾನ ಜರುಗಲಿದೆ. ಅಧಿಸೂಚನೆ ಪ್ರಕಟವಾಗುವುದರೊಂದಿಗೆ ಇಂದಿನಿಂದಲೇ ನಾಮಪತ್ರ ಸಲ್ಲಿಕೆ ಆರಂಭಗೊಂಡಿದೆ. ಉಮೇದುವಾರಿಕೆ ಸಲ್ಲಿಸಲು ಏಪ್ರಿಲ್ ೪ ಕಡೆಯ ದಿನವಾಗಿದ್ದು, ಏಪ್ರಿಲ್ ೫ ರಂದು ಅವುಗಳ ಪರಿಶೀಲನೆ ನಡೆಯುವುದು. ನಾಮಪತ್ರಗಳನ್ನು ವಾಪಸ್ ಪಡೆಯಲು ಏಪ್ರಿಲ್ ೮ ಕಡೆಯದಿನವಾಗಿರುತ್ತದೆ. ಈ ಹಂತದಲ್ಲಿ ಕೇರಳದ ೨೦, ಕರ್ನಾಟಕದ ೧೪, ರಾಜಸ್ಥಾನದ ೧೩, ಉತ್ತರಪ್ರದೇಶ ಮತ್ತು ಮಹಾರಾಷ್ಟ್ರದ ತಲಾ ೮, ಮಧ್ಯಪ್ರದೇಶದ ೭, ಅಸ್ಸಾಂ ಮತ್ತು ಬಿಹಾರದ ತಲಾ ೫, ಪಶ್ಚಿಮ ಬಂಗಾಳ ಮತ್ತು ಛತ್ತೀಸಗಢದ ತಲಾ ೩ ಹಾಗೂ ಮಣಿಪುರದ ಒಂದು ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಇಂದು ೨ನೇ ಹಂತದ ಲೋಕಸಭಾ ಚುನಾವಣೆಗೆ ಅಧಿಸೂಚನೆ ಪ್ರಕಟಗೊಳ್ಳುತ್ತಿದ್ದಂತೆಯೇ, ಕರ್ನಾಟಕದ ೧೪ ದಕ್ಷಿಣ ಲೋಕಸಭಾ ಕ್ಷೇತ್ರಗಳಲ್ಲಿ ಚುನಾವಣಾ ಚಟುವಟಿಕೆ ಗರಿಗೆದರಿದೆ. ಹಲವು ಕ್ಷೇತ್ರಗಳಲ್ಲಿ ನಾಮಪತ್ರಗಳನ್ನು ಸಲ್ಲಿಸಲಾಗುತ್ತಿದೆ.

<><*<><>*><>

ಭಾರತೀಯ ಜನತಾ ಪಾರ್ಟಿ, ಲೋಕಸಭಾ ಚುನಾವಣೆಗೆ ನಿನ್ನೆ ರಾತ್ರಿ ಅಭ್ಯರ್ಥಿಗಳ ಮತ್ತೊಂದು ಪಟ್ಟಿ ಬಿಡುಗಡೆ ಮಾಡಿದೆ. ಪಕ್ಷೇತರ ಸಂಸದರಾಗಿದ್ದ ನವನೀತ ರಾಣಾ ಅವರಿಗೆ ಮಹಾರಾಷ್ಟ್ರದ ಅಮರಾವತಿ ಲೋಕಸಭಾ ಕ್ಷೇತ್ರದ ಟಿಕೆಟ್ ನೀಡಲಾಗಿದ್ದರೆ, ಕರ್ನಾಟಕದ ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಪಕ್ಷದ ಹಿರಿಯ ನಾಯಕ ಗೋವಿಂದ್ ಕಾರಜೋಳ ಅವರಿಗೆ ಟಿಕೆಟ್ ನೀಡಲಾಗಿದೆ. ಹರಿಯಾಣ ಮುಖ್ಯಮಂತ್ರಿ

ನಯಾಬ್ ಸಿಂಗ್ ಸೈನಿ ಅವರು ಕರ್ನಲ್ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಸ್ಪರ್ಧಿಸಲಿದ್ದಾರೆ. ಈ ಮಧ್ಯೆ ಆಂಧ್ರಪ್ರದೇಶ ವಿಧಾನಸಭಾ ಚುನಾವಣೆಗೂ ಬಿಜೆಪಿ ಪಕ್ಷ ೧೦ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಿದೆ. ಈ ಪೈಕಿ ಪಕ್ಷದ ನಾಯಕ ವೈ.ಎಸ್. ಚೌಧರಿ ಅವರು ವಿಜಯವಾಡ ವಿಧಾನಸಭೆ ಕ್ಷೇತ್ರದಿಂದ ಹಾಗೂ ಪಿ. ವಿಷ್ಣುಕುಮಾರ್ ರಾಜು ವಿಶಾಖಪಟ್ಟಣ ಉತ್ತರ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ.

<><*<><>*><>

ಮುಂಬರುವ ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ಪಕ್ಷ ೧೪ ಅಭ್ಯರ್ಥಿಗಳ ಮತ್ತೊಂದು ಪಟ್ಟಿಯನ್ನು ಪ್ರಕಟಿಸಿದೆ. ನವದೆಹಲಿಯಲ್ಲಿ ನಡೆದ ಕಾಂಗ್ರೆಸ್ ಕೇಂದ್ರೀಯ ಚುನಾವಣಾ ಸಮಿತಿ ಸಭೆಯ ಬಳಿಕ ಈ ಪಟ್ಟಿಯನ್ನು ಪ್ರಕಟಿಸಲಾಯಿತು. ಉತ್ತರಪ್ರದೇಶದ ಘಾಜಿಯಾಬಾದ್ ಲೋಕಸಭಾ ಕ್ಷೇತ್ರದಿಂದ ಡಾಲಿ ಶರ್ಮಾ, ಸೀತಾಪುರ ಕ್ಷೇತ್ರದಿಂದ ನಕುಲ್ ದುಬೇ ಸ್ಪರ್ಧಿಸಲಿದ್ದಾರೆ. ಜಾರ್ಖಂಡ್‌ನ ಕುಂತಿ ಕ್ಷೇತ್ರಕ್ಕೆ ಪಕ್ಷದ ನಾಯಕ ಕಾಲಿಚರಣ್ ಮುಂಡಾ ಅವರಿಗೆ ಟಿಕೆಟ್ ನೀಡಲಾಗಿದೆ. ಮಧ್ಯಪ್ರದೇಶದ ವಿದಿಶಾ ಕ್ಷೇತ್ರದಿಂದ ಪ್ರತಾಪ್ ಭಾನು ಶರ್ಮಾ ಹಾಗೂ ಗುನಾ ಸಂಸದೀಯ ಕ್ಷೇತ್ರದಿಂದ ರಾವ್ ಯದುವೇಂದ್ರ ಸಿಂಗ್ ಅವರು ಕಣಕ್ಕಿಳಿಯಲಿದ್ದಾರೆ.

<><*<><>*><>

ನವದೆಹಲಿಯಲ್ಲಿ ಇಂದಿನಿಂದ ಸೇನಾ ಕಮಾಂಡರ್‌ಗಳ ಸಮಾವೇಶ ಹೈಬ್ರೀಡ್ ಮಾದರಿಯಲ್ಲಿ ಆರಂಭವಾಗಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್, ಏಪ್ರಿಲ್ ೨ರಂದು ಸಮಾವೇಶ ಉದ್ದೇಶಿಸಿ ಮಾತನಾಡಲಿದ್ದಾರೆ. ಅಲ್ಲದೇ, ಹಿರಿಯ ಸೇನಾ ಸಿಬ್ಬಂದಿಗಳ ಜೊತೆ ಸಂವಾದ ನಡೆಸಲಿದ್ದಾರೆ. ಇಂದು ಸೇನಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಮನೋಜ್ ಪಾಂಡೆ ಅವರು, ಕಮಾಂಡ್ ಕೇಂದ್ರ ಕಚೇರಿಯಿಂದ ವರ್ಚುವಲ್ ಮಾದರಿ ಮೂಲಕ ಭಾಗವಹಿಸಿ, ಸೇನಾ ಕಮಾಂಡರ್ ಜೊತೆ ಸಂವಾದ ನಡೆಸಿದರು. ಈ ಸಮಾವೇಶದಲ್ಲಿ ನೂತನ ಆವಿಷ್ಕಾರ, ತರಬೇತಿ ಮತ್ತು ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಸುಧಾರಣೆ, ಪರಿಣಾಮಕಾರಿ ಕಾರ್ಯ ನಿರ್ವಹಣೆ, ಕಮಾಂಡರ್‌ಗಳ ಮತ್ತು ಅವರ ಕುಟುಂಬ ಸದಸ್ಯರುಗಳ ಕಲ್ಯಾಣಕ್ಕೆ ಸಂಬಂಧಿಸಿದಂತೆ ಚರ್ಚೆ, ಸಂವಾದ ಕಾರ್ಯಕ್ರಮಗಳು ಜರುಗಲಿವೆ. ಏಪ್ರಿಲ್ ೨ರಂದು ನಡೆಯಲಿರುವ ಕೊನೆಯ ದಿನದ ಕಾರ್ಯಕ್ರಮದಲ್ಲಿ ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಅನಿಲ್ ಚೌಹಾಣ್, ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ಆರ್.ಹರಿಕುಮಾರ್ ಮತ್ತು ವಾಯುಪಡೆ ಮುಖ್ಯಸ್ಥ ಏರ್‌ಚೀಫ್ ಮಾರ್ಷಲ್ ವಿ.ಆರ್.ಚೌಧರಿ ಅವರು, ಸಮಾವೇಶದಲ್ಲಿ ಮಾತನಾಡಲಿದ್ದಾರೆ.

<><*<><>*><>

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರ ಆಹ್ವಾನದ ಮೇರೆಗೆ ಉಕ್ರೇನ್ ವಿದೇಶಾಂಗ ಸಚಿವ ಡಿಮಿಟ್ರೋ ಕುಲೇಬಾ ಅವರು, ಭಾರತಕ್ಕೆ ಎರಡು ದಿನಗಳ ಅಧಿಕೃತ ಭೇಟಿಗಾಗಿ ಇಂದು ನವದೆಹಲಿಗೆ ಆಗಮಿಸಿದ್ದಾರೆ. ವಿದೇಶಾಂಗ ವ್ಯವಹಾರಗಳ ಸಚಿವರು ಮತ್ತು ಉಪ ರಾಷ್ಟ್ರೀಯ ಭದ್ರತಾ ಸಲಹೆಗಾರರೊಂದಿಗೆ ಅಧಿಕೃತ ಸಭೆಗಳನ್ನು ಒಳಗೊಂಡಂತೆ ಕುಲೇಬಾ ಅವರು ಹಲವಾರು ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದಾರೆ. ಎರಡೂ ದೇಶಗಳ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ದ್ವಿಪಕ್ಷೀಯ ಪಾಲುದಾರಿಕೆ ಹಾಗೂ ಸಹಕಾರದ ಕುರಿತು ಉಭಯ ಸಚಿವರು ಚರ್ಚಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಉಕ್ರೇನ್ ವಿದೇಶಾಂಗ ಸಚಿವರು, ವ್ಯಾಪಾರ ಸಮುದಾಯದೊಂದಿಗೂ ಸಂವಹನ ನಡೆಸುವ ನಿರೀಕ್ಷೆಯಿದೆ. ಏಳು ವರ್ಷಗಳಲ್ಲಿ ಉಕ್ರೇನ್ ವಿದೇಶಾಂಗ ಸಚಿವರೊಬ್ಬರು ಭಾರತಕ್ಕೆ ಭೇಟಿ ನೀಡುತ್ತಿರುವುದು ಇದೇ ಮೊದಲ ಬಾರಿಯಾಗಿದೆ.

<><*<><>*><>

ವಿಶ್ವದಾದ್ಯಂತ ೨೦೨೨ ರಲ್ಲಿ ಉತ್ಪಾದಿಸಲಾದ ಆಹಾರದಲ್ಲಿ ಶೇಕಡ ೧೯ ರಷ್ಟು ಅಥವಾ ಸುಮಾರು ೧.೦೫ ಬಿಲಿಯನ್ ಮೆಟ್ರಿಕ್ ಟನ್‌ಗಳಷ್ಟು ಜಾಗತಿಕವಾಗಿ ವ್ಯರ್ಥವಾಗಿದೆ ಎಂದು ವಿಶ್ವಸಂಸ್ಥೆಯ ಹೊಸ ವರದಿಯಲ್ಲಿ ತಿಳಿಸಿದೆ. ನಿನ್ನೆ ಪ್ರಕಟವಾದ ವಿಶ್ವಸಂಸ್ಥೆ ಪರಿಸರ ಕಾರ್ಯಕ್ರಮದ ಆಹಾರ ತ್ಯಾಜ್ಯ ಸೂಚ್ಯಂಕ ವರದಿಯ ಪ್ರಕಾರ, ೨೦೩೦ರ ವೇಳೆಗೆ ಆಹಾರ ತ್ಯಾಜ್ಯವನ್ನು ಅರ್ಧದಷ್ಟು ಕಡಿಮೆ ಮಾಡುವ ದೇಶಗಳ ಪ್ರಗತಿಯನ್ನು ಪರಿಶೀಲಿಸಲಿದೆ. ವಿಶ್ವಸಂಸ್ಥೆ, ವರದಿ ಮಾಡುವ ದೇಶಗಳ ಸಂಖ್ಯೆ ದ್ವಿಗುಣಗೊಂಡಿದೆ. ೨೦೧೯ ರಲ್ಲಿ ಜಾಗತಿಕವಾಗಿ ಉತ್ಪಾದನೆಯಾದ ೯೩೧ ಮಿಲಿಯನ್ ಮೆಟ್ರಿಕ್ ಟನ್ ಆಹಾರ ವ್ಯರ್ಥವಾಗಿದೆ. ಪ್ರತಿ ವ್ಯಕ್ತಿಯು ವಾರ್ಷಿಕವಾಗಿ ಸುಮಾರು ೭೯ ಕಿಲೋಗ್ರಾಂಗಳಷ್ಟು ಆಹಾರವನ್ನು ವ್ಯರ್ಥ ಮಾಡುತ್ತಾನೆ ಎಂದು ಸಂಶೋಧಕರು ಕಂಡುಕೊಂಡಿದ್ದಾರೆ, ಹೆಚ್ಚಿನ ತ್ಯಾಜ್ಯ - ಶೇಕಡ ೬೦ ರಷ್ಟು ಮನೆಗಳಿಂದ ಹಾಗೂ ಶೇಕಡ ೨೮ ರಷ್ಟು ರೆಸ್ಟೋರೆಂಟ್‌ಗಳಿಂದ ಮತ್ತು ಸುಮಾರು ಪ್ರತಿಶತ ೧೨ ರಷ್ಟು ಚಿಲ್ಲರೆ ವ್ಯಾಪಾರಿಗಳಿಂದ ಬಂದಿದೆ ಎಂದು ವಿಶ್ವಸಂಸ್ಥೆ ವರದಿಯಲ್ಲಿ ತಿಳಿಸಲಾಗಿದೆ.

<><*<><>*><>

ಪಶ್ಚಿಮ ವಲಯದಲ್ಲಿನ ಭಾರತ-ಚೀನಾ ಗಡಿ ಪ್ರದೇಶಗಳಲ್ಲಿನ ವಾಸ್ತವಿಕ ನಿಯಂತ್ರಣ ರೇಖೆಯ ಉದ್ದಕ್ಕೂ ಸಂಪೂರ್ಣ ನಿರ್ಲಿಪ್ತತೆ ಸಾಧಿಸುವ ಮತ್ತು ಉಳಿದ ಸಮಸ್ಯೆಗಳನ್ನು ಪರಿಹರಿಸುವ ಮಾರ್ಗಗಳ ಕುರಿತು ಭಾರತ-ಚೀನಾ, ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡಿವೆ. ಭಾರತ-ಚೀನಾ ಗಡಿ ವ್ಯವಹಾರಗಳ ಸಮಾಲೋಚನೆ ಮತ್ತು ಸಮನ್ವಯಕ್ಕಾಗಿ ಕಾರ್ಯ ನಿರ್ವಹಣೆ ಕುರಿತು ೨೯ನೇ ಸಭೆ ಬೀಜಿಂಗ್‌ನಲ್ಲಿ ನಿನ್ನೆ ನಡೆಯಿತು., ಈ ಸಂದರ್ಭದಲ್ಲಿ ಎರಡೂ ಕಡೆಯಿಂದ ಗಡಿ ಪ್ರದೇಶಗಳಲ್ಲಿನ ವಾಸ್ತವಿಕ ನಿಯಂತ್ರಣ ರೇಖೆಯ ವಿಷಯಕ್ಕೆ ಸಂಬಂಧಿಸಿದಂತೆ ಆಳವಾಗಿ ಚರ್ಚೆ ನಡೆಯಿತು. ರಾಜತಾಂತ್ರಿಕ ಮತ್ತು ಸೇನಾ ಮಾರ್ಗಗಳ ಮೂಲಕ ನಿಯಮಿತ ಸಂಪರ್ಕ ಕಾಪಾಡಿಕೊಳ್ಳಲು ಒಪ್ಪಿಗೆ ಸೂಚಿಸಲಾಯಿತು. ಗಡಿ ಪ್ರದೇಶಗಳಲ್ಲಿ ಶಾಂತಿ ಮತ್ತು ನೆಮ್ಮದಿ ಕಾಪಾಡುವ ಅಗತ್ಯತೆ ಕುರಿತು ಅಭಿಪ್ರಾಯಗಳನ್ನು ಹಂಚಿಕೊಳ್ಳಲಾಯಿತು. ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಪೂರ್ವ ಏಷ್ಯಾದ ಜಂಟಿ ಕಾರ್ಯದರ್ಶಿಯವರು ಭಾರತ ನಿಯೋಗದ ನೇತೃತ್ವ ವಹಿಸಿದ್ದರು.

<><*<><>*><>

೨೦೨೪-೨೫ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ- ಮನ್ರೇಗಾದಲ್ಲಿ ಪರಿಷ್ಕೃತ ವೇತನವನ್ನು ಕೇಂದ್ರವು ಅಧಿಸೂಚಿಸಿದೆ. ಹರಿಯಾಣದಲ್ಲಿ ಕೌಶಲ್ಯರಹಿತವಾಗಿ ಕೈಯಿಂದ ಕೆಲಸಮಾಡುವ ಕಾರ್ಮಿಕರ ದೈನಂದಿನ ವೇತನವನ್ನು ೩೭೪ ರೂಪಾಯಿಗಳಿಗೆ ನಿಗದಿಪಡಿಸಲಾಗಿದೆ. ಉಳಿದಂತೆ ಗೋವಾದಲ್ಲಿ ೩೫೬, ಕರ್ನಾಟಕದಲ್ಲಿ ೩೪೯, ಕೇರಳದಲ್ಲಿ ೩೪೬ ಹಾಗೂ ಪಂಜಾಬ್‌ನಲ್ಲಿ ೩೨೨ ರೂಪಾಯಿ ದೈನಂದಿನ ವೇತನವನ್ನು ನಿಗದಿಗೊಳಿಸಲಾಗಿದೆ. ಈ ಹೊಸ ಅಧಿಸೂಚನೆಯು ಬರುವ ತಿಂಗಳು ಏಪ್ರಿಲ್ ೧ರಿಂದ ಜಾರಿಗೆ ಬರಲಿದೆ. ಕಳೆದ ವರ್ಷ ಮಾರ್ಚ್‌ನಲ್ಲಿ ಮನ್ರೇಗಾ ವೇತನದಲ್ಲಿ ಕೊನೆಯ ಪರಿಷ್ಕರಣೆ ಮಾಡಲಾಗಿತ್ತು.

<><*<><>*><>

ಕಾರಾಗೃಹದಿಂದ ದೆಹಲಿ ಸರ್ಕಾರ ನಡೆಯುವುದಿಲ್ಲ ಎಂದು ರಾಷ್ಟ್ರ ರಾಜಧಾನಿ ಜನತೆಗೆ ದೆಹಲಿ ಲೆಫ್ಟಿನೆಂಟ್ ಗೌರ್ನರ್ ವಿನಯ್ ಕುಮಾರ್ ಸಕ್ಸೆನಾ ಭರವಸೆ ನೀಡಿದ್ದಾರೆ. ಅರವಿಂದ್ ಕೇಜ್ರಿವಾಲ್ ಅವರು, ಜೈಲಿನಿಂದಲೇ ಮುಖ್ಯಮಂತ್ರಿಯಾಗಿ ಕಾರ್ಯ ಮುಂದುವರೆಸಲಿದ್ದಾರೆ ಎಂದು ಆಪ್ ನಾಯಕರುಗಳು ಹೇಳಿಕೆ ನೀಡಿರುವ ಹಿನ್ನೆಲೆಯಲ್ಲಿ ದೆಹಲಿಯ ಲೆಫ್ಟಿನೆಂಟ್ ಗೌರ್ನರ್ ಈ ಕರೆ ನೀಡಿದ್ದಾರೆ. ದೆಹಲಿ ಅಬಕಾರಿ ನೀತಿ ಹಣಕಾಸಿನ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯವು, ಈ ತಿಂಗಳ ೨೧ರಂದು ಅರವಿಂದ್ ಕೇಜ್ರಿವಾಲ್‌ರನ್ನು ಬಂಧಿಸಿತ್ತು.

<><*<><>*><>

ಮುಂದಿನ ನಾಲ್ಕು ದಿನಗಳ ಕಾಲ ಪಶ್ಚಿಮ ಹಿಮಾಲಯ ಪ್ರದೇಶ ಮತ್ತು ವಾಯವ್ಯ ಭಾರತದ ಬಯಲು ಪ್ರದೇಶಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇದೇ ೩೧ ರವರೆಗೆ ಜಮ್ಮು-ಕಾಶ್ಮೀರ, ಲಡಾಖ್, ಗಿಲ್ಗಿಟ್, ಬಾಲ್ಟಿಸ್ತಾನ್, ಮುಜಫರಾಬಾದ್, ಹಿಮಾಚಲ ಪ್ರದೇಶ, ಪಂಜಾಬ್, ಹರಿಯಾಣ, ಚಂಡೀಗಢ, ಉತ್ತರ ಪ್ರದೇಶ ಮತ್ತು ಉತ್ತರಾಖಂಡದಲ್ಲಿ ಗುಡುಗು ಮತ್ತು ಮಿಂಚುಗಳೊಂದಿಗೆ ಹಗುರ ಮಳೆಯಾಗುವ ನಿರೀಕ್ಷೆಯಿದೆ.

<><*<><>*><>

ಮಿಯಾಮಿ ಓಪನ್ ಟೆನಿಸ್ ಟೂರ್ನಿಯ ಪುರುಷರ ಡಬಲ್ಸ್ ಸೆಮಿಫೈನಲ್ ಪಂದ್ಯದಲ್ಲಿಂದು ಭಾರತದ ರೋಹನ್ ಬೋಪಣ್ಣ ಮತ್ತು ಆಸ್ಟ್ರೇಲಿಯಾದ ಮ್ಯಾಥ್ಯೂ ಎಬ್ಡೆನ್ ಅವರು ಸ್ಪೇನಿನ ಮಾಸೆಲ್ ಗ್ರ್ಯಾನೊಲರ್ಸ್ ಮತ್ತು ಅರ್ಜೆಂಟೀನಾದ ಹೊರಾಸಿಯೊ ಝುಬಲೊಸ್ ವಿರುದ್ಧ ಸೆಣಸಲಿದ್ದಾರೆ. ಭಾರತೀಯ ಕಾಲಮಾನ ರಾತ್ರಿ ೧೧.೩೦ಕ್ಕೆ ಪಂದ್ಯ ಆರಂಭವಾಗಲಿದೆ. ಭಾರತ-ಆಸ್ಟ್ರೇಲಿಯಾ ಜೋಡಿಯು ನಿನ್ನೆ ನಡೆದ ಡಬಲ್ಸ್ ಕ್ವಾರ್ಟರ್‌ಫೈನಲ್ ಪಂದ್ಯದಲ್ಲಿ ಡಚ್‌ನ ಸೆಮ್ ವೆರ್ಬೀಕ್ ಮತ್ತು ಆಸೀಸ್‌ನ ಜಾನ್ ಪ್ಯಾಟ್ರಿಕ್ ಸ್ಮಿತ್ ವಿರುದ್ಧ ೩-೬, ೭-೫, ೧೦-೭ ಸೆಟ್‌ಗಳಿಂದ ಜಯಗಳಿಸಿ ಅಂತಿಮ ನಾಲ್ಕರಘಟ್ಟ ತಲುಪಿತು.

<><*<><>*><>

ಜೈಪುರದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಸವಾಯಿ ಮಾನ್‌ಸಿಂಗ್ ಕ್ರೀಡಾಂಗಣದಲ್ಲಿ ಈ ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಹೈದರಾಬಾದ್‌ನಲ್ಲಿ ನಿನ್ನೆ ರಾತ್ರಿ ನಡೆದ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡ ೩೧ ರನ್‌ಗಳಿಂದ ಮುಂಬೈ ಇಂಡಿಯನ್ಸ್ ವಿರುದ್ಧ ಜಯಗಳಿಸಿತು. ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೨.೩೦ ಕ್ಕೆ

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೨.೩೦ ಕ್ಕೆ <>*><>